6

ಇಲಾಖೆ / ವಿಷಯ : DEPARTMENT / SUBJECT: ______

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE 13/10/2020

## ಮುಚ್ಚಿದ ಲಕೋಟೆಯಲ್ಲಿ ಹೈಕೋರ್ಟ್‌ಗೆ ಸಲ್ಲಿಸಿದ ಚುನಾವಣಾ ಆಯೋಗ

# ಗ್ರಾಪಂ ಚುನಾವಣೆ ಸಂಭಾವ್ಯ ವೇಳಾಪಟ್ಟಿ ಸಲ್ಲಿಕೆ

13-10-2020

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗಳ ಚುನಾವಣೆಗಳಿಗಾಗಿ ಸಿದ್ಧಪಡಿಸಲಾಗಿರುವ ಸಂಭಾವ್ಯ ವೇಳಾಪಟ್ಟಿಯನ್ನು ರಾಜ್ಯ ಚುನಾವಣಾ ಆಯೋಗ ಹೈಕೋರ್ಟ್‌ಗೆ ಸಲ್ಲಿಸಿದೆ.



ಅವಧಿ ಪೂರ್ಣಗೊಂಡಿರುವ ಗ್ರಾ.ಪಂ.ಗಳಿಗೆ ಚುನಾವಣೆ ನಡೆಸುವಂತೆ ಸರ್ಕಾರ ಹಾಗೂ ಚುನಾವಣಾ ಆಯೋಗಕ್ಕೆ ನಿರ್ದೇಶಿಸುವಂತೆ ಕೋರಿ ವಿಧಾನಪರಿಷತ್ ಸದಸ್ಯ ಕೆ.ಸಿ. ಕೊಂಡಯ್ಯ ಮತ್ತಿತರರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕ್ ನೇತೃತ್ವದ ವಿಭಾಗೀಯ ಪೀಠ ಸೋಮವಾರ ವಿಚಾರಣೆ ನಡೆಸಿತು.

ಆಯೋಗದ ಪರ ಹಿರಿಯ ವಕೀಲ ಕೆ.ಎನ್. ಫಣೀಂದ್ರ ಸಂಭಾವ್ಯ ವೇಳಾಪಟ್ಟಿಯನ್ನು ಮುಚ್ಚಿದ ಲಕೋಟೆಯಲ್ಲಿ ನ್ಯಾಯಾಲಯಕ್ಕೆ ಸಲ್ಲಿಸಿದರು. ಸದ್ಯ ರಾಜ್ಯದಲ್ಲಿ 2 ವಿಧಾನಸಭಾ ಕ್ಷೇತ್ರಗಳಿಗೆ ಉಪಚುನಾವಣೆ ನಡೆಯುತ್ತಿದೆ. ವಿಧಾನಪರಿಷತ್‌ನ 4 ಕ್ಷೇತ್ರಗಳಿಗೆ ಚುನಾವಣೆ ಚಾಲ್ತಿಯಲ್ಲಿದ್ದು, 18 ಜಿಲ್ಲೆಗಳಲ್ಲಿ ನೀತಿ ಸಂಹಿತೆ ಜಾರಿಯಲ್ಲಿದೆ. ಆಡಳಿತ ಯಂತ್ರ ಚುನಾವಣಾ ಕಾರ್ಯದಲ್ಲಿ ತೊಡಗಿದೆ. ಈ ಚುನಾವಣೆಗಳು ನ.12ಕ್ಕೆ ಮುಕ್ತಾಯಗೊಳ್ಳಲಿದ್ದು, ಆ ನಂತರವೇ ಗ್ರಾ.ಪಂ. ಚುನಾವಣೆಗಳನ್ನು ನಡೆಸಲು ಸಾಧ್ಯ ಎಂದು ಆಯೋಗ ತಿಳಿಸಿದೆ.

**ಆಯೋಗದ ನಿಲುವು ಕೇಳಿದ ಕೋರ್ಟ್:** ವಿಚಾರಣೆ ವೇಳೆ ಆಯೋಗದ ಪರ ವಕೀಲರು, ಚುನಾವಣೆ ಮುಂದೂಡುವಂತೆ ಮನವಿ ಮಾಡಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ ಅ.3ಕ್ಕೆ ಆಯೋಗಕ್ಕೆ ಪತ್ರ ಬರೆದಿದ್ದರು. ಪ್ರಕರಣ ನ್ಯಾಯಾಲಯದಲ್ಲಿರುವ ಕಾರಣ ಮನವಿಯನ್ನು ಕೋರ್ಟ್‌ಗೆ ಸಲ್ಲಿಸುವಂತೆ ಸೂಚಿಸಿ ಅ.6ರಂದು ಸರ್ಕಾರಕ್ಕೆ ಪತ್ರ ಬರೆಯಲಾಗಿದೆ ಎಂದು ನ್ಯಾಯಪೀಠಕ್ಕೆ ತಿಳಿಸಿದರು. ಅಡ್ವೊಕೇಟ್ ಜನರಲ್ ಪ್ರಭುಲಿಂಗ ಕೆ. ನಾವದಗಿ ಪ್ರತಿಕ್ರಿಯಿಸಿ, ಚುನಾವಣೆ ಮುಂದೂಡುವಂತೆ ಮನವಿ ಮಾಡಿಲ್ಲ. ಸದ್ಯದ ಪರಿಸ್ಥಿತಿ ಅವಲೋಕಿಸಿ ಸೂಕ್ತ ತೀರ್ಮಾನ ತೆಗೆದುಕೊಳ್ಳುವಂತೆ ಮನವಿ ಮಾಡಲಾಗಿದೆ. ಚುನಾವಣೆ ನಡೆಸಬೇಕೆಂಬ ಉದ್ದೇಶ ಸರ್ಕಾರಕ್ಕೂ ಇದೆ. ಆದರೆ, ಈಗಿನ ಪರಿಸ್ಥಿತಿಯಲ್ಲಿ ಜನರ ಆರೋಗ್ಯವೂ ಮುಖ್ಯವಾಗಿದೆ ಎಂದು ತಿಳಿಸಿದರು.

ಆಗ ನ್ಯಾಯಪೀಠ, ಚುನಾವಣಾ ಆಯೋಗ ಸಾಂವಿಧಾನಿಕ ಸಂಸ್ಥೆಯಾಗಿದೆ. ಆದ್ದರಿಂದ, ಸರ್ಕಾರ ಬರೆದ ಪತ್ರಕ್ಕೆ ಆಯೋಗ ಸ್ಪಷ್ಟ ನಿಲುವು ತಿಳಿಸಬೇಕಾಗುತ್ತದೆ. ಆ ಬಳಿಕ ನ್ಯಾಯಾಲಯ ಅದನ್ನು ಪರಿಶೀಲಿಸಲಿದೆ. ಕರೊನಾ ಸಮಸ್ಯೆ ಇಡೀ ರಾಜ್ಯದಲ್ಲಿ ಒಂದೇ ರೀತಿ ಇಲ್ಲ. ಕೆಲವು ಜಿಲ್ಲೆಗಳಲ್ಲಿ ಪ್ರಕರಣಗಳ ಪ್ರಮಾಣ ಕಡಿಮೆ ಇದ್ದು, ಅಂಥ ಭಾಗಗಳಲ್ಲಿ ಮೊದಲ ಹಂತದಲ್ಲಿ ಚುನಾವಣೆ ನಡೆಸಬಹುದು ಎಂದು ಸಲಹೆ ನೀಡಿತು. ನಿಲುವು ತಿಳಿಸಲು ಚುನಾವಣಾ ಆಯೋಗದ ವಕೀಲರು ಕಾಲಾವಕಾಶ ಕೋರಿದ ಹಿನ್ನೆಲೆಯಲ್ಲಿ, ಅ.16ಕ್ಕೆ ವಿಚಾರಣೆ ಮುಂದೂಡಿತು.